## ಕರ್ನಾಟಕ ಸರ್ಕಾರದ ನಡವಳಿಗಳು.

**ವಿಷಯ:** ಶ್ರೀ ಬಿ.ಬಿ.ಕುಲಕರ್ಣಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯುತಿ ರಾಯಚೂರು ಇವರ ವಿರುದ್ಧದ ಶಿಸ್ತು ಕ್ರಮದ ಬಗ್ಗೆ.

**ಓದಲಾಗಿದೆ:**
1. ಅಪರ ನಿಬಂಧಕರು, ವಿಚಾರಣೆಗಳು-6, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ. ಪತ್ರ ಸಂಖ್ಯೆ:ಕಂಪ್ಲೆಂಟ್/ಉಪಲೋಕ್/ಜಿಎಲ್‌ಬಿ-634/2012 ಎಆರ್‌ಇ-6/ ದಿನಾಂಕ :17-8-2012.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:164:ವಿಸೇಬಿ:2012. ದಿ:10-10-2012.
3. ಮಾನ್ಯ ಉಪ ಲೋಕಾಯುಕ್ತರು-1 ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ: ಲೋಕ್/ಎಆರ್‌ಇ-1/ ಇಎನ್‌ಕ್ಯೂ-429/2012 ದಿನಾಂಕ :28-3-2015.
4. ಅಪರ ನಿಬಂಧಕರು, ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ. ಪತ್ರ ಸಂಖ್ಯೆ: ಲೋಕ್/ಎಆರ್‌ಇ-1/ ಇಎನ್‌ಕ್ಯೂ-429/2012 ದಿನಾಂಕ :31-3-2015.

------

**ಪ್ರಸ್ತಾವನೆ:**

ಶ್ರೀ ಎನ್. ಶಂಕರಪ್ಪ, ಅಧ್ಯಕ್ಷರು, ನೇತಾಜಿ ಸುಭಾಷಚಂದ್ರ ಭೋಸ್, ಯುವಕ ಮಂಡಳಿ, ಜಾಗೀರ್, ವೆಂಕಟಪುರ ಅಂಚೆ, ರಾಯಚೂರು ತಾಲ್ಲೂಕು ಇವರು ಜಾಗೀರ್ ವೆಂಕಟಾಪುರ ಗ್ರಾಮ ಪಂಚಾಯತಿಯಲ್ಲಿ ಅದಕ್ಷ ಆಡಳಿತ ಹಾಗೂ ಅವ್ಯವಹಾರ ನಡೆಯುತ್ತಿದ್ದು, ಈ ಬಗ್ಗೆ ತನಿಖೆ ಜರುಗಿಸುವಂತೆ ಶ್ರೀ ಮುಕ್ಕಣ್ಣ ಕರಿಗಾರ್, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ(ಪ್ರಭಾರ), ಜಿಲ್ಲಾ ಪಂಚಾಯತಿ, ರಾಯಚೂರು ಮತ್ತು ಜಿಲ್ಲಾಧಿಕಾರಿ, ರಾಯಚೂರು ಜಿಲ್ಲೆ, ರಾಯಚೂರು ಇವರಿಗೆ ಹಲವು ಬಾರಿ ಮನವಿ ಮಾಡಿದ್ದರೂ, ಯಾವುದೇ ತನಿಖೆ ಮಾಡಿಲ್ಲವೆಂದು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ ದೂರನ್ನು ಸಲ್ಲಿಸಿರುತ್ತಾರೆ. ಸದರಿ ದೂರಿನ ಬಗ್ಗೆ ವರದಿ ಸಲ್ಲಿಸಲು ಕರ್ನಾಟಕ ಲೋಕಾಯುಕ್ತ ಕಛೇರಿಯಿಂದ ಶ್ರೀ ಬಿ.ಬಿ.ಕುಲಕರ್ಣಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ರಾಯಚೂರು ಇವರಿಗೆ ದಿನಾಂಕ:01-12-2011 ರ ಪತ್ರ ಮತ್ತು ದಿನಾಂಕ:28-12-2011 ರ ನೆನಪೋಲೆಯಲ್ಲಿ ದಿನಾಂಕ:25-01-2012 ರೊಳಗೆ ವರದಿಯನ್ನು ಸಲ್ಲಿಸುವಂತೆ ಸೂಚಿಸಿತ್ತು. ನಂತರ ದಿನಾಂಕ:25-01-2012, 07-03-2012, 05-04-2012 ರಂದು ಕಾರಣ ಕೇಳುವ ನೋಟೀಸನ್ನು ನೀಡಿ ಈ ಬಗ್ಗೆ ವಿವರಣೆ ಸಲ್ಲಿಸುವಂತೆ ಸೂಚಿಸಲಾಗಿತ್ತು. ಅದರೂ ಸಹ ಈ ಅಧಿಕಾರಿಯು ವರದಿ ಸಲ್ಲಿಸದೆ ಬೇಜವಾಬ್ದಾರಿತನ ತೋರಿರುವುದರಿಂದ ಸದರಿಯವರ ವಿರುದ್ಧ ಇಲಾಖಾ ವಿಚಾರಣೆಯನ್ನು ಜರುಗಿಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ-1 ರವರಿಗೆ ವಹಿಸುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಅಪರ ನಿಬಂಧಕರು, ವಿಚಾರಣೆಗಳು-6 ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಕೋರಿರುತ್ತಾರೆ. ಸರ್ಕಾರವು ಉಪ ಲೋಕಾಯುಕ್ತರು-1 ಇವರ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿ, ಸದರಿ ಅಧಿಕಾರಿ ದೂರುದಾರರು ಸಲ್ಲಿಸಿದ ಮನವಿಯ ಬಗ್ಗೆ ಕ್ರಮ ವಹಿಸಲು ವಿಫಲರಾಗಿರುವುದು ಕಂಡು ಬರುವುದರಿಂದ, ಅವರ ವಿರುದ್ಧ ಮಾಡಿರುವ ಆರೋಪಗಳ ಸತ್ಯಾಸತ್ಯತೆಯನ್ನು ಕಂಡು ಹಿಡಿಯಲು ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ.) ನಿಯಮಗಳು 1957ರ ನಿಯಮ 14(ಎ) ರ ಪ್ರಕಾರ ಉಪ ಲೋಕಾಯುಕ್ತ-I ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದಲ್ಲಿ ವಹಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಮಾನ್ಯ ಉಪ ಲೋಕಾಯುಕ್ತ-1 ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಇಲಾಖಾ ವಿಚಾರಣೆ ನಡೆಸಿ, ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿ, ಸದರಿ ಅಧಿಕಾರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ 1958 ರ ನಿಯಮ 214 ರ ಅನುಸಾರ ನಿವೃತ್ತಿ ವೇತನದ 3ನೇ ಒಂದು ಭಾಗವನ್ನು 6 ತಿಂಗಳ ಅವಧಿಯ ವರೆಗೆ ತಡೆಹಿಡಿಯುವ ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆಂದು ಮೇಲೆ ಓದಲಾದ ಕ್ರಮ ಸಂಖ್ಯೆ: (4) ರ ಪತ್ರದಲ್ಲಿ ಅಪರ ನಿಬಂಧಕರು, ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ತಿಳಿಸಿರುತ್ತಾರೆ.

ಸರ್ಕಾರವು ಮಾನ್ಯ ಉಪ ಲೋಕಾಯುಕ್ತ-1 ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:156 :ವಿಸೇಬಿ:2014 ಬೆಂಗಳೂರು ದಿನಾಂಕ:04-06-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಬಿ.ಬಿ.ಕುಲಕರ್ಣಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ರಾಯಚೂರು (ಪ್ರಸ್ತುತ ನಿವೃತ್ತ) ಇವರು ಎಸಗಿರುವ ಕರ್ತವ್ಯಲೋಪ/ದುರ್ನಡತೆ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ 1958 ರ ನಿಯಮ 214(1)(ಎ) ರ ಅನುಸಾರ ನಿವೃತ್ತಿ ವೇತನದ 3ನೇ ಒಂದು ಭಾಗವನ್ನು 6 ತಿಂಗಳ ಅವಧಿಯವರೆಗೆ ತಡೆಹಿಡಿಯುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ಹನುಮಂತಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,(ಸೇ.ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಅಪರ ನಿಬಂಧಕರು, ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು.
4. ಸಂಬಂಧಿಸಿದ ಅಧಿಕಾರಿಗೆ.(ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಯಚೂರು.ರವರ ಮುಖಾಂತರ )
5. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) /ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.
6. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
7. ಮಾಹಿತಿ ಕೇಂದ್ರ / ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.

GO